ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 09-03-2021 ಪ್ರಶ್ನೆ ಸಂಖ್ಯೆ : 131(828)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಬಿ. ಕೆ. ಹರಿಪ್ರಸಾದ್(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 09-03-2021

ಉತ್ತರಿಸುವ ಸಚಿವರು: ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

ವಿಷಯ : ಅನ್ನಭಾಗ್ಯ ಯೋಜನೆಯ ದುರುಪಯೋಗ

(ಅ) ಕಳೆದ ಮೂರು ವರ್ಷಗಳಲ್ಲಿ ಅನ್ನಭಾಗ್ಯ ಯೋಜನೆಯಲ್ಲಿ ಅಕ್ಕಿ ಮತ್ತು ಇತರೆ ಆಹಾರ ಧಾನ್ಯಗಳನ್ನು ಅಕ್ರಮವಾಗಿ ಸಂಗ್ರಹಿಸಿ ದಾಸ್ತಾನು ಮಾಡಿ ಮಾರಾಟ ಮಾಡುತ್ತಿರುವ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ; (ಜಿಲ್ಲಾವಾರು ಪ್ರಕರಣಗಳ ಸಂಖ್ಯೆ, ಪ್ರಕರಣಗಳಲ್ಲಿ ಒಳಗೊಂಡವರ ವಿವರ, ಅಕ್ರಮ ದಾಸ್ತಾನಿನ ಪ್ರಮಾಣದ ವಿವರ ಒದಗಿಸುವುದು)

(ಆ) ಈ ರೀತಿ ವಶಪಡಿಸಿಕೊಂಡ ಅಕ್ರಮ ದಾಸ್ತಾನಿನ ಆಹಾರ ಧಾನ್ಯಗಳನ್ನು ಹಾಳಾಗುವ ಮುಂಚೆ ಕಾನೂನು ಪ್ರಕಾರ ಸೂಕ್ತವಾಗಿ ವಿಲೇವಾರಿ ಮಾಡಲು ಕ್ರಮ ಜರುಗಿಸಲಾಗಿದೆಯೇ;

(ಇ) ಅಕ್ರಮ ದಾಸ್ತಾನುಗಾರರ ಬಗ್ಗೆ ಹಾಗೂ ಅದಕ್ಕೆ ಸಹಕರಿಸಿದ ಅಧಿಕಾರಿಗಳು, ನ್ಯಾಯ ಬೆಲೆ ಅಂಗಡಿ ಮಾಲೀಕರ ಬಗ್ಗೆ ಕೈಗೊಂಡಿರುವ ಕ್ರಮಗಳೇನು? (ವಿವರ ಒದಗಿಸುವುದು)